**All India Radio: Bangalore**
**National Bulletin In Kannada**
**27.04.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಪಹಲ್ಗಾಮ್ ದಾಳಿಕೋರರ ವಿರುದ್ಧ ಕಠಿಣ ಕ್ರಮ ; ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಭರವಸೆ
2. ಚಾರ್‌ಧಾಮ್ ಯಾತ್ರೆ : ೭೭ ಪಾಕಿಸ್ತಾನಿ ಪ್ರಜೆಗಳ ನೋಂದಣಿ ರದ್ದುಗೊಳಿಸಿದ ಉತ್ತರಾಖಂಡ ಸರ್ಕಾರ
3. ಸಕಲ ಸರ್ಕಾರಿ ಗೌರವಗಳೊಂದಿಗೆ ಬಾಹ್ಯಾಕಾಶ ವಿಜ್ಞಾನಿ ಡಾ. ಕೆ. ಕಸ್ತೂರಿ ರಂಗನ್ ಅಂತ್ಯಕ್ರಿಯೆ
4. ಐಪಿಎಲ್ ಟಿ-೨೦ ಕ್ರಿಕೆಟ್: ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ

<><><><>

ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ದೇಶದ ಏಕತೆ, ೧೪೦ ಕೋಟಿ ಭಾರತೀಯರ ಒಗ್ಗಟ್ಟು ನಿರ್ಣಾಯಕ ಪಾತ್ರ ವಹಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮನ್ ಕಿ ಬಾತ್‌ನ ೧೨೧ನೇ ಆವೃತ್ತಿಯಲ್ಲಿಂದು ಭಾವುಕರಾಗಿ ಮಾತು ಆರಂಭಿಸಿದ ಪ್ರಧಾನಿ, ಈ ತಿಂಗಳ ೨೨ ರಂದು ನಡೆದ ಭಯೋತ್ಪಾದಕ ಘಟನೆಯಿಂದ ದೇಶದ ನಾಗರಿಕರು ಶೋಕದಲ್ಲಿದ್ದಾರೆ. ಸಂತ್ರಸ್ತ ಕುಟುಂಬಗಳ ಬಗ್ಗೆ ಪ್ರತಿ ಭಾರತೀಯನಲ್ಲೂ ಅಪಾರ ಸಹಾನುಭೂತಿಯಿದೆ. ರಾಜ್ಯ, ಭಾಷೆಯನ್ನು ಮೀರಿ ಎಲ್ಲ ಜನರು ಈ ದಾಳಿಯಲ್ಲಿ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರ ನೋವನ್ನು ಸ್ವತಃ ಅನುಭವಿಸುತ್ತಿದ್ದಾರೆ ಹಾಗೂ ತಕ್ಕ ಪ್ರತ್ಯುತ್ತರದ ನಿರೀಕ್ಷೆಯಲ್ಲಿದ್ದಾರೆ ಎಂದರು. ಕಾಶ್ಮೀರದಲ್ಲಿ ಕಾಣುತ್ತಿರುವ ಸರ್ವೋತುಮುಖ ಬೆಳವಣಿಗೆಯನ್ನು ಸಹಿಸಲಾಗದೆ ದುಷ್ಟರು ಹೇಡಿತನದ ಕೆಲಸ ಮಾಡಿದ್ದಾರೆ ಎಂದ ಅವರು, ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಸಮಸ್ತ ಭಾರತೀಯರ ಏಕತೆಯೇ ದೊಡ್ಡ ಶಕ್ತಿಯಾಗಲಿದೆ. ಈಗಾಗಲೇ ಅನೇಕ ಜಾಗತಿಕ ನಾಯಕರು ಕರೆ ಮಾಡಿ ತಮ್ಮ ಬೆಂಬಲ ಸೂಚಿಸಿದ್ದು, ಭಯೋತ್ಪಾದನೆ ವಿರುದ್ಧದ ಈ ಹೋರಾಟದಲ್ಲಿ ಭಾರತಕ್ಕೆ ಜಾಗತಿಕ ಮಟ್ಟದಲ್ಲಿ ಬೆಂಬಲ ದೊರೆಯುತ್ತಿದೆ ಎಂದು ಹೇಳಿದರು. ಇದೇ ವೇಳೆ ಅವರು, ಸಂತ್ರಸ್ತ ಕುಟುಂಬಗಳಿಗೆ ಶ್ರೀಘ್ರವೇ ನ್ಯಾಯ ಒದಗಿಸಿ ಕೊಡುವ ಮತ್ತು ಅಪರಾಧಿಗಳು, ಸಂಚುಕೋರರಿಗೆ ಕಠಿಣ ಉತ್ತರ ನೀಡುವ ಭರವಸೆ ನೀಡಿದರು.

**ಧ್ವನಿ : ಪ್ರಧಾನಿ ಮೋದಿ (೨೯ ಸೆಕೆಂಡ್‌ಗಳು)**

ಇತ್ತೀಚೆಗೆ ಅಗಲಿದ ಖ್ಯಾತ ವಿಜ್ಞಾನಿ ಹಾಗೂ ಇಸ್ರೋ ಮಾಜಿ ಅಧ್ಯಕ್ಷ ಡಾ.ಕೆ.ಕಸ್ತೂರಿರಂಗನ್ ಅವರನ್ನು ಸ್ಮರಿಸಿದ ಪ್ರಧಾನಿ, ವಿಜ್ಞಾನ, ಶಿಕ್ಷಣ ಮತ್ತು ಭಾರತದ ಬಾಹ್ಯಾಕಾಶ ಕಾರ್ಯಕ್ರಮವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವಲ್ಲಿ ಕಸ್ತೂರಿ ರಂಗನ್ ಕೊಡುಗೆ ಸದಾ ಸ್ಮರಣೀಯ. ಅವರ ನೇತೃತ್ವದಲ್ಲಿ ಇಸ್ರೋಗೆ ಹೊಸ ಸ್ಥಾನಮಾನ ದೊರೆಯಿತು ಎಂದರು. ಅವರ ಮಾರ್ಗದರ್ಶನದಲ್ಲಿ ಮುಂದುವರೆದ ಬಾಹ್ಯಾಕಾಶ ಕಾರ್ಯಕ್ರಮಗಳು ಭಾರತದ ಪ್ರಯತ್ನಗಳಿಗೆ ಜಾಗತಿಕ ಮನ್ನಣೆ ತಂದುಕೊಟ್ಟವು. ದೇಶದ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಸಿದ್ಧಪಡಿಸುವಲ್ಲಿ ಡಾ.ಕೆ.ಕಸ್ತೂರಿರಂಗನ್ ಅವರು ಬಹು ದೊಡ್ಡ ಪಾತ್ರವಹಿಸಿದ್ದರು ಎಂದು ಹೇಳಿದರು. ಮ್ಯಾನ್ಮಾರ್ ಭೂಕಂಪದ ಕುರಿತು ಪ್ರಸ್ತಾಪಿಸಿದ ಪ್ರಧಾನಿ, ಆಪರೇಷನ್ ಬ್ರಹ್ಮ ಮೂಲಕ ಭಾರತ ನೀಡಿದ ಸಹಕಾರದ ಕುರಿತು ಮಾಹಿತಿ ಹಂಚಿಕೊಂಡು, ನೆರೆ-ಹೊರೆ ರಾಷ್ಟ್ರಗಳಿಗೆ ಭಾರತದ ಬೆಂಬಲ ನೀಡುವ ಮತ್ತು 'ವಸುಧೈವ ಕುಟುಂಬಕಂ' ಪರಿಕಲ್ಪನೆಗೆ ಬದ್ಧತೆಯನ್ನು ಪುನರುಚ್ಚರಿಸಿದರು. ಇದೇ ವೇಳೆ ಅಫ್ಘಾನಿಸ್ತಾನ್, ನೇಪಾಳ ಸೇರಿದಂತೆ ಅನೇಕ ರಾಷ್ಟ್ರಗಳಿಗೆ ಭಾರತ, ರೇಬಿಸ್, ಟೆಟನಸ್ ಸೇರಿದಂತೆ ಅಪಾಯಕಾರಿ ಕಾಯಿಲೆಗಳನ್ನು ತಡೆಗಟ್ಟುವ ಅಗತ್ಯ ಲಸಿಕೆಗಳ ರವಾನಿಸಿದೆ ಎಂದರು. ಸಾಧಾರಣವಾಗಿ ಬೆಟ್ಟಗುಡ್ಡಗಳಲ್ಲಿ ಬೆಳೆಯಲಾಗುವ ಸೇಬನ್ನು ಕರ್ನಾಟಕದಲ್ಲಿ ಬೆಳೆಯಲಾಗುತ್ತಿರುವ ಕುರಿತು ಮನದ ಮಾತಿನಲ್ಲಿ ಮಾಹಿತಿ ನೀಡಿದ ಪ್ರಧಾನಿ, ಕರ್ನಾಟಕದ ಬಾಗಲಕೋಟೆ ನಿವಾಸಿ ಶ್ರೀಶೈಲ್ ತೆಲೀ ಅವರು ೩೫ ಡಿಗ್ರಿಗಿಂತ ಅಧಿಕ ತಾಪಮಾನವಿರುವ ಬಯಲು ಪ್ರದೇಶದಲ್ಲಿ ಸೇಬು ಬೆಳೆದಿರುವ ಕುರಿತು ಅಚ್ಚರಿ ವ್ಯಕ್ತಪಡಿಸಿದರು. ಇಂದು ಶ್ರೀಶೈಲ್ ಅವರು ನೆಟ್ಟ ಸೇಬು ಮರಗಳಲ್ಲಿ ಹೆಚ್ಚಿನ ಸಂಖ್ಯೆಯ ಸೇಬುಗಳು ಬೆಳೆಯುತ್ತಿವೆ ಮತ್ತು ಅವುಗಳನ್ನು ಮಾರಾಟ ಮಾಡುವ ಮೂಲಕ ಉತ್ತಮ ಆದಾಯವನ್ನು ಗಳಿಸುತ್ತಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹರ್ಷ ವ್ಯಕ್ತಪಡಿಸಿದರು.

<><><><>

ಚಾರ್‌ಧಾಮ್ ಮತ್ತು ಹೇಮ್‌ಕುಂಡ್ ಸಾಹಿಬ್ ಯಾತ್ರೆಗೆ ನೋಂದಾಯಿಸಿಕೊಂಡಿದ್ದ ೭೭ ಪಾಕಿಸ್ತಾನಿ ಪ್ರಜೆಗಳ ನೋಂದಣಿಯನ್ನು ಉತ್ತರಾಖಂಡ ಸರ್ಕಾರ ರದ್ದುಗೊಳಿಸಿದೆ. ತಕ್ಷಣದಿಂದ ಜಾರಿಗೆ ಬರುವ ಈ ನಿರ್ಧಾರವನ್ನು ಉತ್ತರಾಖಂಡ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವ ಸತ್ಪಾಲ್ ಮಹಾರಾಜ್ ಘೋಷಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರವಾಸೋದ್ಯಮ ಮತ್ತು ಭಯೋತ್ಪಾದನೆ ಒಟ್ಟಿಗೆ ಹೋಗಲು ಸಾಧ್ಯವಿಲ್ಲ. ಎಲ್ಲ ಭಕ್ತರಿಗೆ ಸುರಕ್ಷಿತ ಮತ್ತು ಆಧ್ಯಾತ್ಮಿಕವಾಗಿ ತೃಪ್ತಿಕರ ಅನುಭವವನ್ನು ಖಚಿತಪಡಿಸಿಕೊಳ್ಳಲು ಉತ್ತರಾಖಂಡ ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು. ಚಾರ್‌ಧಾಮ್ ಯಾತ್ರೆಗೆ ಸಿದ್ಧತೆಗಳು ಪೂರ್ಣಗೊಂಡಿವೆ.

ಇಲ್ಲಿಯವರೆಗೆ ೧೮೫ ದೇಶಗಳ ೨೫ ಸಾವಿರಕ್ಕೂ ಹೆಚ್ಚು ಅಂತಾರಾಷ್ಟ್ರೀಯ ಯಾತ್ರಿಕರು ಸೇರಿದಂತೆ ಒಟ್ಟು ೨೨ ಲಕ್ಷಕ್ಕೂ ಹೆಚ್ಚು ಯಾತ್ರಾರ್ಥಿಗಳು ಆನ್‌ಲೈನ್ ಮೂಲಕ ನೋಂದಾಯಿಸಿಕೊಂಡಿದ್ದಾರೆ ಎಂದು ಅವರು ಮಾಹಿತಿ ನೀಡಿದರು. ಸುಗಮ ಕಾರ್ಯಾಚರಣೆಯನ್ನು ಖಚಿತಪಡಿಸಿಕೊಳ್ಳಲು, ಹೆಲಿಕಾಪ್ಟರ್ ಟಿಕೆಟ್‌ಗಳ ಅನಧಿಕೃತ ಮಾರಾಟ ಮತ್ತು ತೀರ್ಥಯಾತ್ರೆ ಮಾರ್ಗದಲ್ಲಿ ಅನಧಿಕೃತ ಪಾರ್ಕಿಂಗ್ ಶುಲ್ಕ ಸಂಗ್ರಹವನ್ನು ತಡೆಯಲು ಸರ್ಕಾರ ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಿದೆ. ಯಾತ್ರೆಗೆ ಆಫ್‌ಲೈನ್ ನೋಂದಣಿ ನಾಳೆಯಿಂದ ಪ್ರಾರಂಭವಾಗಲಿದ್ದು, ಯಾತ್ರಿಕರಿಗೆ ಸಹಾಯ ಮಾಡಲು ಹರಿದ್ವಾರ, ಋಷಿಕೇಶ, ವಿಕಾಸನಗರ ಮತ್ತು ಹಾರ್ಬರ್ಟ್‌ಪುರದಲ್ಲಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಸಚಿವ ಸತ್ಪಾಲ್ ಮಹಾರಾಜ್ ತಿಳಿಸಿದ್ದಾರೆ.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿ ವಿಚಾರದಲ್ಲಿ ಕಾಂಗ್ರೆಸ್ ರಾಜಕೀಯ ಮಾಡುತ್ತಿದೆ ಮತ್ತು ಪಾಕಿಸ್ತಾನವನ್ನು ಬೆಂಬಲಿಸುತ್ತಿದೆ ಎಂದು ಬಿಜೆಪಿ ನಾಯಕ ಪ್ರದೀಪ್ ಭಂಡಾರಿ ಆರೋಪಿಸಿದ್ದಾರೆ. ನವದೆಹಲಿಯಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಂತ್ರಸ್ತರನ್ನು ಅವಮಾನಿಸುವ ಹೇಳಿಕೆಗಳನ್ನು ನೀಡುವ ಮೂಲಕ ಕಾಂಗ್ರೆಸ್ ಪಾಕಿಸ್ತಾನಕ್ಕೆ ಬೆಂಬಲಿಸಿದೆ ಎಂದು ದೂರಿದ್ದಾರೆ. ಕರ್ನಾಟಕದ ಕಾಂಗ್ರೆಸ್ ನಾಯಕರು, ಭಯೋತ್ಪಾದಕರು ಧರ್ಮದ ಬಗ್ಗೆ ಕೇಳಲಿಲ್ಲ ಎಂಬ ಸುಳ್ಳು ಹೇಳಿಕೆಗಳನ್ನು ನೀಡುತ್ತಿದ್ದಾರೆ. ಇದು ರಾಜಕೀಯ ಮಾಡುವ ಸಮಯವಲ್ಲ. ದೇಶವು ಒಗ್ಗಟ್ಟಿನಿಂದ ಪಾಕಿಸ್ತಾನಕ್ಕೆ ಸೂಕ್ತ ಉತ್ತರ ನೀಡಬೇಕಾದ ಸಮಯವಿದು ಎಂದು ಪ್ರದೀಪ್ ಭಂಡಾರಿ ಹೇಳಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ರೈತರು ಮತ್ತು ಕೃಷಿಯ ಸಬಲೀಕರಣಕ್ಕೆ ಆದ್ಯತೆ ನೀಡಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಹೇಳಿದ್ದಾರೆ. ತಮಿಳುನಾಡು ಕೃಷಿ ವಿಶ್ವವಿದ್ಯಾನಿಲಯದಲ್ಲಿಂದು ಮಾತನಾಡಿದ ಅವರು, ರೈತ ಸಮುದಾಯಗಳ ಪ್ರಯೋಜನಕ್ಕಾಗಿ ಅನೇಕ ಕಲ್ಯಾಣ ಯೋಜನೆಗಳನ್ನು ಕೇಂದ್ರ ಸರ್ಕಾರ ಜಾರಿಗೆ ತಂದಿದೆ. ಪ್ರಧಾನಮಂತ್ರಿ ಕಿಸಾನ್ ಯೋಜನೆಯಂತಹ ರೈತಪರ ಯೋಜನೆಗಳು ರೈತರಿಗೆ ನೇರವಾಗಿ ಉಪಯುಕ್ತವಾಗಿವೆ ಎಂದರು. ೨೦೪೭ರ ವೇಳೆಗೆ ಭಾರತವನ್ನು ೩೦ ಟ್ರಿಲಿಯನ್ ಅಮೆರಿಕ ಡಾಲರ್ ಆರ್ಥಿಕತೆಯನ್ನಾಗಿಸುವ ಗುರಿಯನ್ನು ಸಾಧಿಸಲು, ಎಲ್ಲ ವಲಯಗಳಲ್ಲಿ ಆರ್ಥಿಕ ಸುಧಾರಣೆಗಳನ್ನು ಕೈಗೊಳ್ಳಬೇಕಿದೆ ಎಂದ ಅವರು, ಕೃಷಿ ಸಂಬಂಧಿತ ಚಟುವಟಿಕೆಗಳಲ್ಲಿ ಹೂಡಿಕೆ

ಮಾಡುವಂತೆ ಇದೇ ವೇಳೆ ಉದ್ಯಮಿಗಳಿಗೆ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಮನವಿ ಮಾಡಿದರು.

<><><><>

ಖ್ಯಾತ ಬಾಹ್ಯಾಕಾಶ ವಿಜ್ಞಾನಿ, ಇಸ್ರೋ ಮಾಜಿ ಅಧ್ಯಕ್ಷ ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿ ಶಿಲ್ಪಿ ಡಾ. ಕೃಷ್ಣಸ್ವಾಮಿ ಕಸ್ತೂರಿ ರಂಗನ್ ಅವರ ಅಂತ್ಯಕ್ರಿಯೆ ಇಂದು ಬೆಂಗಳೂರಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು. ೮೪ ವರ್ಷದ ಡಾ. ಕಸ್ತೂರಿ ರಂಗನ್ ಕಳೆದ ಶುಕ್ರವಾರ ಬೆಂಗಳೂರಿನಲ್ಲಿ ನಿಧನರಾದರು. ಅವರ ಪಾರ್ಥಿವ ಶರೀರವನ್ನು ಇಂದು ರಾಮನ್ ಸಂಶೋಧನಾ ಸಂಸ್ಥೆಯಲ್ಲಿ ಸಾರ್ವಜನಿಕರ ಅಂತಿಮ ದರ್ಶನಕ್ಕಾಗಿ ಇರಿಸಲಾಗಿತ್ತು. ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಇಸ್ರೋ ಅಧ್ಯಕ್ಷ ವಿ.ನಾರಾಯಣನ್ ಸೇರಿದಂತೆ ಅನೇಕ ಗಣ್ಯರು ಇಂದು ಅಂತಿಮ ನಮನ ಸಲ್ಲಿಸಿದರು.

<><><><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆದ ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ-೨೦ ಪಂದ್ಯಾವಳಿಯ ದಿನದ ಮೊದಲ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ತಂಡ ೫೪ ರನ್‌ಗಳಿಂದ ಭರ್ಜರಿ ಗೆಲುವು ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ಇಂಡಿಯನ್ಸ್ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೧೫ ರನ್ ಗಳಿಸಿತು. ಈ ಗುರಿಯನ್ನು ಬೆನ್ನತ್ತಿದ ಲಕ್ನೋ ಸೂಪರ್ ಜೈಂಟ್ಸ್, ನಿಗದಿತ ೨೦ ಓವರ್‌ಗಳಲ್ಲಿ ಎಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡು, ೧೬೧ ರನ್ ಗಳಿಸಲಷ್ಟೇ ಶಕ್ತವಾಯಿತು. ಇದೇ ವೇಳೆ ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ದಿನದ ೨ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><><><>

ಕೆನಡಾದ ವ್ಯಾಂಕೋವರ್‌ನಲ್ಲಿ ನಡೆದ ಲಾಪು ಲಾಪು ಫಿಲಿಪಿನೋ ಉತ್ಸವದಲ್ಲಿ ವಾಹನವೊಂದು ಜನಸಂದಣಿಯ ಮೇಲೆ ಹರಿದ ಪರಿಣಾಮ ಒಂಬತ್ತು ಜನರು ಸಾವನ್ನಪ್ಪಿದ್ದು, ಅನೇಕರು ಗಾಯಗೊಂಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>